## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ಸಿಕೆ ಪುರ ಗ್ರಾಮ ಪಂಚಾಯತ್ ಕಾರ್ಯದರ್ಶಿಯಾಗಿದ್ದ ಶ್ರೀ ಜಿ.ಬೊಮ್ಮಲಿಂಗಯ್ಯ (ಪ್ರಸ್ತುತ ತುಮಕೂರು ತಾಲ್ಲೂಕು, ಬೆಳಗುಂಬ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-1383/2015/ಎಆರ್‌ಎಲ್‌ಓ-1, ದಿನಾಂಕ: 30-10-2017.
2. ಮಾನ್ಯ ಉಪಲೋಕಾಯುಕ್ತರವರ ವರದಿಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ-1383/2015/ಎಆರ್‌ಎಲ್‌ಓ-1, ದಿನಾಂಕ: 24-08-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ:24.08.2017ರ ವರದಿಯಲ್ಲಿ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ಸಿಕೆ ಪುರ ಗ್ರಾಮ ಕೊಟ್ಟೂರು ನಿವಾಸಿಯಾದ ಶ್ರೀ ರಂಗಸ್ವಾಮಿ ಬಿನ್ ರಾಮಪ್ಪ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ಸಿಕೆ ಪುರ ಗ್ರಾಮ ಪಂಚಾಯತ್ ಕಾರ್ಯದರ್ಶಿಯಾಗಿದ್ದ ಶ್ರೀ ಜಿ.ಬೊಮ್ಮಲಿಂಗಯ್ಯ (ಪ್ರಸ್ತುತ ತುಮಕೂರು ತಾಲ್ಲೂಕು ಬೆಳಗುಂಬ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9 ರಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ನಿಡಗಲ್ಲು ಹೋಬಳಿ ಸಿಕೆ ಪುರ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಕೊತ್ತೂರು ಗ್ರಾಮದ ಶ್ರೀಮತಿ ಪಾರ್ವತಮ್ಮ ಎಂಬುವವರಿಗೆ 2006-07 ನೇ ಸಾಲಿನ ಗ್ರಾಮೀಣ ಆಶ್ರಯ ಯೋಜನೆಯಡಿ ವಸತಿ ಸೌಲಭ್ಯ ಪಡೆದುಕೊಂಡ ಫಲಾನುಭವಿಯಾಗಿದ್ದು, ಆದರೆ ಸದರಿಯವರಿಗೆ ಖುಷ್ಕಿ ಜಮೀನಿನಲ್ಲಿ ಅಡಿಕೆ ತೋಟವಿದ್ದು ಹಾಗೂ ಅವರ ಮಗ ಸರ್ಕಾರಿ ನೌಕರರಾಗಿರುವುದಾಗಿ ಹೇಳಿದ್ದಾರೆ.

ದೂರಿನ ಬಗ್ಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ 2006-07ನೇ ಸಾಲಿನ ಸದರಿ ಗ್ರಾಮ ಪಂಚಾಯತಿಗೆ 60 ಮನೆಗಳ ನಿರ್ಮಾಣಕ್ಕೆ ಫಲಾನುಭವಿಗಳ ಆಯ್ಕೆ ಕುರಿತು ದಿ:26.03.2006 ರಂದು 20 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿತ್ತು. ಈ ಬಗ್ಗೆ ದಿ:29.03.2006 ರಂದು ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಸ್ಥಳೀಯ ಶಾಸಕರ ಅನುಮೋದನೆ ಪಡೆಯಲಾಗಿದೆ. ಅಲ್ಲದೇ ಫಲಾನುಭವಿಗಳಿಗೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿದೆ. ಶ್ರೀಮತಿ ಪಾರ್ವತಮ್ಮನವರು ಸಹ ಫಲಾನುಭವಿಗಳ ಆಯ್ಕೆಗೆ ಸೂಕ್ತ ವ್ಯಕ್ತಿಯಾದ ಕಾರಣ ಸದರಿಯವರನ್ನು ಆಯ್ಕೆ ಮಾಡಲಾಗಿದೆ. ಸದರಿಯವರು 4 ಹಂತದ ಮನೆ ನಿರ್ಮಾಣಗೊಂಡು, ಮನೆ ಸಂಪೂರ್ಣವಾಗಿ ಮುಕ್ತಾಯಗೊಂಡು ಎಲ್ಲಾ ಬಿಲ್ಲುಗಳನ್ನು ಹಂತ ಹಂತವಾಗಿ ಪಾವತಿಸಿದೆ. ಶ್ರೀಮತಿ ಪಾರ್ವತಮ್ಮನವರು ವಿಧವೆಯಾಗಿದ್ದು, ಇಬ್ಬರು ಗಂಡು ಮಕ್ಕಳು ಪ್ರತ್ಯೇಕವಾಗಿ ವಾಸವಾಗಿದ್ದಾರೆ. ಸದರಿಯವರು ಬಾಡಿಗೆ ಮನೆಯಲ್ಲಿ ವಾಸವಾಗಿದ್ದು, ಗ್ರಾಮ ಪಂಚಾಯತಿಯ ಸಭೆಯ ತೀರ್ಮಾನದಂತೆ ಆಯ್ಕೆ ಮಾಡಲಾಗಿದೆ. ಶ್ರೀಮತಿ ಪಾರ್ವತಮ್ಮನವರಿಗೆ 4 ಎಕರೆ ಜಮೀನು ಇರುವ ಬಗ್ಗೆ ದಾಖಲೆಗಳಿದ್ದು, ಯಾವುದೇ ಕರ್ತವ್ಯಲೋಪವೆಸಗಿಲ್ಲ, ಪಾರದರ್ಶಕವಾಗಿ ಫಲಾನುಭವಿಗಳ ಆಯ್ಕೆ ಮಾಡಲಾಗಿದೆಯೆಂದು ಹೇಳಿದ್ದಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಯಾವುದೇ ಪ್ರತ್ಯುತ್ತರವನ್ನು ಸಲ್ಲಿಸಿಲ್ಲ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ,**

ಪಾವಗಡ ತಾಲ್ಲೂಕು ಸಿಕೆ ಪುರ ಗ್ರಾಮ ಪಂಚಾಯತಿಗೆ ಸೇರಿದ ಕೊತ್ತೂರು ಗ್ರಾಮದ ಶ್ರೀಮತಿ ಪಾರ್ವತಮ್ಮ ಕೋಂ ಲೇಟ್ ಚಿಕ್ಕತಿಮ್ಮಪ್ಪನವರಿಗೆ 2006-07ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿ ವಸತಿ ಸೌಲಭ್ಯ ಯೋಜನೆಯಡಿ ಆಯ್ಕೆ ಮಾಡಿದ್ದು, 4 ಹಂತದ ಬಿಲ್ಲುಗಳನ್ನು ಸಹ ಪಾವತಿಸಿ, ಮನೆ ಸಂಪೂರ್ಣವಾಗಿ ನಿರ್ಮಾಣವಾಗಿರುವುದು ಕಂಡು ಬಂದಿದೆ. ಶ್ರೀಮತಿ ಪಾರ್ವತಮ್ಮನವರನ್ನು ದಿ:26.03.2006 ರ ವಾರ್ಡ ಸಭೆ ಮೂಲಕ ಆಯ್ಕೆ ಮಾಡಿದ್ದು, ನಂತರ ದಿ:29.03.2006 ರಂದು ಗ್ರಾಮಸಭೆ ಮುಖಾಂತರ ಸದರಿಯವರನ್ನು ಫಲಾನುಭವಿಯನ್ನಾಗಿ ಆಯ್ಕೆ ಮಾಡಿ, ದಿ:29.03.2006 ರಂದು ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಅನುಮೋದನೆ ಪಡೆದು ಮಂಡಿಸಿದೆ. ಅದರಂತೆ ಶ್ರೀಮತಿ ಪಾರ್ವತಮ್ಮನವರು ಫಲಾನುಭವಿಯಾಗಿ ಆಯ್ಕೆಯಾಗಿದ್ದಾರೆ. ದೂರುದಾರರು ಶ್ರೀಮತಿ ಪಾರ್ವತಮ್ಮನವರು ಖುಷ್ಕಿ ಜಮೀನಿನಲ್ಲಿ ಅಡಿಕೆ ತೋಟವಿದ್ದು, ಇಬ್ಬರು ಗಂಡು ಮಕ್ಕಳು ಸರ್ಕಾರಿ ನೌಕರಿಯಲ್ಲಿದ್ದು, ಸದರಿಯವರು ವಸತಿ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಿಲ್ಲವೆಂದು ಹೇಳಿ, ಶ್ರೀಮತಿ ಪಾರ್ವತಮ್ಮನವರ ಹೆಸರಿನಲ್ಲಿರುವ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದಾರೆ. ಅವುಗಳನ್ವಯ ಶ್ರೀಮತಿ ಪಾರ್ವತಮ್ಮನವರ ಹೆಸರಿನಲ್ಲಿ 4 ಎಕರೆ ಜಮೀನು ಇರುವುದು ಕಂಡು ಬಂದಿದೆ. ಸದರಿಯವರು ಹೊಂದಿರುವ ಜಮೀನಿನ ಬಗ್ಗೆ ತಹಶೀಲ್ದಾರ್, ಪಾವಗಡ ರವರು ವರದಿಯನ್ನು ಎದುರುದಾರರ ಮೂಲಕ ಸಲ್ಲಿಸಿದ್ದು, ಅದರಲ್ಲಿ ಶ್ರೀಮತಿ ಪಾರ್ವತಮ್ಮನವರು ಪಾವಗಡ ತಾಲ್ಲೂಕು ಕೆತ್ತೂರು ಗ್ರಾಮದಲ್ಲಿ ಸರ್ವೆ ನಂ.78ಪಿ5, 78ಪಿ6, 90/2, 91/2 ರಂತೆ ಒಟ್ಟು 12 ಎಕರೆ 16 ಗುಂಟೆ ಜಮೀನು ಹೊಂದಿರುವುದು ಕಂಡು ಬಂದಿದೆ. ಅದೇ ರೀತಿ, ದೂರುದಾರರ ಮಗ ಸರ್ಕಾರಿ ನೌಕರಿಯಲ್ಲಿರುವ ಅಂಶವನ್ನು ಎದುರುದಾರರು ಒಪ್ಪಿದ್ದಾರೆ. ಯಾವುದೇ ವ್ಯವಸಾಯದ ಜಮೀನನ್ನು ಹೊಂದಿರುವ ವ್ಯಕ್ತಿ ಹಾಗೂ ಅವರ ಕುಟುಂಬದ ಸದಸ್ಯ ಸರ್ಕಾರಿ ನೌಕರಿಯಲ್ಲಿದ್ದ ಸಂದರ್ಭದಲ್ಲಿ ವಸತಿ ಸೌಲಭ್ಯ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಾಗಿಲ್ಲ. ಆದರೆ, ಶ್ರೀಮತಿ ಪಾರ್ವತಮ್ಮನವರು 2006-07ನೇ ಸಾಲಿನಲ್ಲಿ ಸರ್ಕಾರದ ವತಿಯಿಂದ ಫಲಾನುಭವಿಯಾಗಿ ಆಯ್ಕೆಯಾಗಿ 4 ಹಂತದ ಬಿಲ್ ಪಡೆದು ಮನೆ ಕೆಲಸ ಸಂಪೂರ್ಣವಾಗಿ ಮುಕ್ತಾಯಗೊಂಡಿದೆ. ಸದರಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಅಧಿಕಾರ ಆಯಾ ಸ್ಥಳೀಯ ಚುನಾಯಿತ ಸದಸ್ಯರು ಮತ್ತು ಆಯಾ ಕ್ಷೇತ್ರದ ಶಾಸಕರು ಹಾಗೂ ಎದುರುದಾರರು ಆಯ್ಕೆ ಮಾಡಿದ್ದು, ಸರ್ಕಾರಿ ನೌಕರಿಯಲ್ಲಿರುವ ವಿಚಾರ ಮತ್ತು 12 ಎಕರೆ 16 ಗುಂಟೆ ವ್ಯವಸಾಯದ ಜಮೀನು ಹೊಂದಿರುವ ವಿಚಾರ ಗೊತ್ತಿದ್ದರೂ ಸಹ ಸರ್ಕಾರದ ರಾಜೀವ ಗಾಂಧೀ ವಸತಿ ಯೋಜನೆ ಹಾಗೂ ಇಂದಿರಾ ಆವಾಸ್ ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ವಸತಿ ಯೋಜನೆ ಅಡಿ ಸೌಲಭ್ಯ ನೀಡಿರುವುದು ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಆದುದರಿಂದ, ಎದುರುದಾರರು ಸರ್ಕಾರಿ ನೌಕರರಾಗಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಅಡಿಯಲ್ಲಿ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14-ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/842/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 08-12-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಜಿ.ಬೊಮ್ಮಲಿಂಗಯ್ಯ, ಕಾರ್ಯದರ್ಶಿ, ಸಿಕೆ ಪುರ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ (ಪ್ರಸ್ತುತ ತುಮಕೂರು ತಾಲ್ಲೂಕು ಬೆಳಗುಂಬ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

8/12

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 45 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಪಾವಗಡ, ತುಮಕೂರು ಜಿಲ್ಲೆ.
6. ಶ್ರೀ ಜಿ.ಬೊಮ್ಮಲಿಂಗಯ್ಯ, ಕಾರ್ಯದರ್ಶಿ, ಸಿಕೆ ಪುರ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ (ಪ್ರಸ್ತುತ ತುಮಕೂರು ತಾಲ್ಲೂಕು ಬೆಳಗುಂಬ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.